ಪಶುವೈದ್ಯಕೀಯ ಪರೀಕ್ಷಕರನ್ನು ೫೦:೫೦ ಅನುಪಾತದಲ್ಲಿ ನೇರ ನೇಮಕಾತಿ ಹಾಗೂ ಮುಂಬಡ್ತಿ ಮೂಲಕ. ಭರ್ತಿ ಮಾಡಲು ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

೧೫೦ ಪಶುವೈದ್ಯಕೀಯ ಸಹಾಯಕರನ್ನು ಪಶುವೈದ್ಯಕೀಯ ಪರೀಕ್ಷಕರಾಗಿ ಮುಂಬಡ್ತಿ ನೀಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

೧೩೮೪ ಡಿ ದರ್ಜೆ ಹುದ್ದೆಗಳನ್ನು ಇತರೆ ಇಲಾಖೆಗಳಿಂದ ಮರುವಿನ್ಯಾಸದ ಮೂಲಕ ಹಾಗೂ ಅನುಕಂಪಾರ್ಥದ ಮೂಲಕ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

೩೮೪೪ (೪೭೬೯) ಶ್ರೀ ಪಾಪರೆಡ್ಡಿ ಎ. (ರಾಯಚೂರು) :– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ವಕ್ಫ್ ಮಂಡಳಿಗೆ ಪ್ರಸ್ತುತ ಆಯವ್ಯಯದಲ್ಲಿ ನೀಡಿದ ಹಣ ಎಷ್ಟು; ಪ್ರತಿ ತಾಲ್ಲೂಕಿಗೆ ಎಷ್ಟು ಹಣವನ್ನು ನೀಡಲಾಗುತ್ತದೆ ವಿವರಣೆ ನೀಡುವುದು?

ಶ್ರೀ ಮೆರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು) :

ಅ) ಪ್ರಸ್ತುತ ಆಯವ್ಯಯದಲ್ಲಿ ಪ್ರತ್ಯೇಕವಾಗಿ ವಕ್ಫ್ ಮಂಡಳಿಗೆ ರೂ.೧.೫೦ಕೋಟಿ ಮೊದಲನೆ ಕಂತಾಗಿ ಹಣ ಬಿಡುಗಡೆ ಮಾಡಲಾಗಿದೆ. ಸಂಸ್ಥೆಗಳಿಂದ ಮತ್ತು ಗಣ್ಯ ವ್ಯಕ್ತಿಗಳಿಂದ ಪ್ರಸ್ತಾವನೆಗಳು ಬಂದಲ್ಲಿ, ಹಣದ ಲಭ್ಯತೆಯನ್ನು ಆಧರಿಸಿ, ಪ್ರತಿ ಸಂಸ್ಥೆಗೆ ರೂ. ೨೦೦೦೦ ರಿಂದ ರೂ. ೫೦,೦೦೦ ರವರೆಗೆ ಮಂಜೂರು ಮಾಡಲಾಗುವುದು. ತಾಲ್ಲೂಕುವಾರು ಪ್ರತ್ಯೇಕವಾಗಿ ಹಣ ಬಿಡುಗಡೆ ಮಾಡಲಾಗುತ್ತಿಲ್ಲ.

೩೮೪೫ (೪೭೭೦) ಶ್ರೀ ಪಾಪರೆಡ್ಡಿ ಎ. (ರಾಯಚೂರು) :– ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಸ್ಪಿನ್ನಿಂಗ್ ಮಿಲ್ ಮುಚ್ಚಲ್ಪಟ್ಟು ೧೫ ವರ್ಷಗಳು ಕಳೆದಿದ್ದು ಇದರ ಬಗ್ಗೆ ಯಾವುದೇ ಕ್ರಮ ಜರುಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಸ್ಪಿನ್ನಿಂಗ್ ಮಿಲ್‌ನ ಬಗ್ಗೆ ಸರ್ಕಾರ ಮುಂದೆ ಕೈಗೊಳ್ಳುವ ಕ್ರಮವನ್ನು ಸ್ಪಷ್ಟಪಡಿಸುವುದೇ ವಿವರ ನೀಡುವುದು?